PELATRO
Be Relevant

Pelatro Limited
5th Floor, 144, MSR North Tower
Outer Ring Road, Nagavara
Bengaluru – 560 045, India

CIN: L72100KA2013PLC068239
Tel: +91 80 6534 9800
hello@pelatro.com
www.pelatro.com

PEL/2025-26/19

June 18, 2025

The Secretary
National Stock Exchange of India Limited
Exchange Plaza, 5th Floor, Plot no. C/lG Block
Bandra-Kurla Complex Bandra (E)
**MUMBAI - 400 051**

**Scrip Code: PELATRO**

Dear Sir/Madam,

**SUB: Intimation of Newspaper Publication under Regulation 30 pursuant of SEBI (Listing Obligations and Disclosure Requirements) Regulation, 2015 and Rule 20 of Companies Act, 2013.**

Pursuant to Regulation 30 read with Schedule III Part A Para A, we are enclosing herewith copies of Newspaper cutting published in the following newspapers under Rule 20 of Companies Act, 2013:

1. Financial Express (English Newspaper); and
2. Palar Pathrike (Kannada Newspaper).

Both were published today regarding intimation of the Annual General Meeting (AGM) of the Company to be held on July 11, 2025, through Audio-visual means as intimated to the Exchange vide letter dated June 17, 2025.

You are requested to kindly take the same on record.

Thanking you.

Yours sincerely,

**For Pelatro Limited**

KHUSHBOO SHARMA
Digitally signed by KHUSHBOO SHARMA
Date: 2025.06.18 11:55:03 +05'30'

PELATRO LIMITED Bangalore India

**Khushboo Sharma**
**Company Secretary and Compliance Officer**

***Encl: as above***

# ಸಿಂಹಾಸನಪುರಾಧೀಶ್ವರಿ ಹಾಸನಾಂಬೆ..!

ಸಾಮಾನ್ಯವಾಗಿ ಕೆಲವೊಂದು ಊರುಗಳಿಗೆ ದೇವರ ಹಿನ್ನೆಲೆಯಲ್ಲಿ ಬಂದಿರುವಂತಹ ಹೆಸರುಗಳಿವೆ. ಇಂತಹ ಸಾಲಿನಲ್ಲಿ ಸೇರುವ ಊರು 'ಹಾಸನ'. ಈ ನಗರಕ್ಕೆ ತಾಯಿ 'ಹಾಸನಾಂಬೆ'ಯಿಂದಲೇ ಬಂದ ಹೆಸರಿದು. ಆದಿಶಕ್ತಿಸ್ವರೂಪಿಣಿಯೂ, ವರಪ್ರದಾಯಿನಿಯೂ ಆದ 'ಹಾಸನಾಂಬೆ'ಗೆ ಈ ಹೆಸರು ಸಿಂಹಾಸನಪುರಿ ಎಂಬ ಹೆಸರಿನಿಂದ ಬಂದಿದೆ. ಸಿಂಹಾಸನಪುರವು ಅರ್ಜುನನ ಮೊಮ್ಮಗನಾದ ಜನಮೇಜಯ ಮಹಾರಾಜನ ಸ್ಥಳವಾಗಿತ್ತು. ಸಪ್ತಮಾತೃಕೆಯರಾದ ಬ್ರಾಹ್ಮಿ, ಮಾಹೇಶ್ವರಿ, ಕೌಮಾರಿ, ವೈಷ್ಣವಿ; ವಾರಾಹಿ, ಇಂದ್ರಾಣಿ ಮತ್ತು ಚಾಮುಂಡಿ ಕಾಶಿ ವಾರಣಾಸಿಯಿಂದ ದಕ್ಷಿಣಾಭಿಮುಖವಾಗಿ ಬರುತ್ತಿರುವಾಗ ಇಲ್ಲಿನ ಪ್ರಕೃತಿ ಸೌಂದರ್ಯಕ್ಕೆ ಮನಸೋತರು. ಅವರಲ್ಲಿ ವೈಷ್ಣವಿ, ಕೌಮಾರಿ, ಮಾಹೇಶ್ವರಿಯರು ಹಾಸನಾಂಬ ದೇವಾಲಯದಲ್ಲಿ ಹುತ್ತದ ರೂಪದಲ್ಲಿ ಹಾಗೂ ಬ್ರಾಹ್ಮಿ ದೇವಿಯು ಕೆಂಚಮ್ಮನ ಹೊಸಕೋಟೆಯಲ್ಲಿ ನೆಲೆಸಿದಳು. ಇನ್ನುಳಿದ ದೇವತೆಗಳಾದ ಚಾಮುಂಡಿ, ವಾರಾಹಿ, ಇಂದ್ರಾಣಿಯರು ದೇವಿಗೆರೆಯ ಬಳಿ ನೆಲೆಸಿದರು ಎನ್ನಲಾಗುತ್ತದೆ.

ಸಪ್ತಮಾತೃಕೆಯರು ಸದಾ ನಗುವ ದೇವತೆಯಾಗಿರುವ ಕಾರಣದಿಂದ ನಸುನಗುವ ದೇವತೆಗಳು ನೆಲೆಸಿರುವುದರಿಂದ ಹಸನ, ಹಾಸನವಾಗಿದೆ ಎನ್ನಲಾಗುತ್ತದೆ. 'ಹಾಸನಾಂಬ' ಎಂದರೆ ನಸುನಗುತ್ತಾ ಹಸನ್ಮುಖಿಯಾಗಿರುವ ತಾಯಿ ಎಂದೂ ಇರಬಹುದು. ದೇಗುಲದ ಮೂರ್ತಿ ಹುತ್ತದ ಆಕಾರದಲ್ಲಿ ಇರುವುದೇ ವೈಶಿಷ್ಟ್ಯ. ಈಕೆಯ ದರ್ಶನ ವರ್ಷದಲ್ಲಿ ಒಂದು ಬಾರಿ, ದೇಗುಲದ ಬಾಗಿಲು ತೆಗೆದರೆ, ಬಲಿಪಾಡ್ಯಮಿಯ ಮಾರನೇ ದಿನ ಬಾಗಿಲು ಮುಚ್ಚುವುದು. ಬಾಗಿಲು ಮುಚ್ಚುವ ದಿನ ಹಚ್ಚಿದ ದೀಪವು ಮುಂದಿನ ವರ್ಷ ಬಾಗಿಲು ತೆರೆಯುವ ತನಕ ಉರಿಯುತ್ತದೆ ಎಂಬುದು ದೇವಿಯ ಮಹಿಮೆ, ಮಹಾರಹಸ್ಯ, ಬಿಡಿಸಲಾಗದ ಕಗ್ಗಂಟು!. ಇದಕ್ಕೆಲ್ಲಾ ನಂಬಿಕೆಯೇ ಆಧಾರ.

ಐತಿಹಾಸಿಕ ಕಥೆಯ ಪ್ರಕಾರ ಹಾಸನವು ಚೋಳರಸರ ಅಧಿಪತಿಯಾದ ಬುಕ್ಕ ನಾಯಕ ಮತ್ತು ಅವನ ವಂಶಸ್ಥರಾದಾಗಿತ್ತು. ಹೊಯ್ಸಳರಿಗೂ ಪೂರ್ವಕಾಲದಲ್ಲಿ ಇದು ಗಂಗರ ಆಡಳಿತಕ್ಕೆ ಒಳಪಟ್ಟಿತ್ತು. ಬುಕ್ಕನಾಯಕನ ನಂತರ 12ನೆಯ ಶತಮಾನದಲ್ಲಿ ಕೃಷ್ಣಪ್ಪನಾಯಕ ಎಂಬ ಪಾಳೇಗಾರನಿಗೆ ಸೇರಿತ್ತು.

ನಾಯಕನು ಒಮ್ಮೆ ಪ್ರಯಾಣ ಹೊರಟಾಗ ಮೊಲವೊಂದು ಅಡ್ಡ ಬಂದು ಪಟ್ಟಣವನ್ನು ಪ್ರವೇಶಿಸಿತು. ಈ ಅಪಶಕುನದಿಂದ ನಾಯಕನು ನೊಂದುಕೊಂಡನು. ಆಗ ಅವನ ಕನಸಿನಲ್ಲಿ ಹಾಸನಾಂಬೆಯು ಪ್ರತ್ಯಕ್ಷಳಾಗಿ 'ಮಗು, ಖಿನ್ನ ಮನಸ್ಸು ಬಿಡು, ಈ ಸ್ಥಳದಲ್ಲಿ ಕೋಟೆಯನ್ನು ಕಟ್ಟು, ಇಲ್ಲಿ ಹುತ್ತದ ರೂಪದಲ್ಲಿ ನೆಲೆಸಿದ್ದೇನೆ' ಎಂದು ಹೇಳಿದಳಂತೆ. ಹೀಗಾಗಿ ಕೋಟೆಯನ್ನು ಕಟ್ಟಿದ ಕೃಷ್ಣಪ್ಪನಾಯಕನು, ಅದಕ್ಕೆ 'ಹಾಸನಾಂಬೆ' ಎಂದು ಹೆಸರಿಟ್ಟನು. ಹಾಸನ ತಾಲ್ಲೂಕಿನ ಕುದುರುಗುಂಡಿ ಗ್ರಾಮದಲ್ಲಿರುವ ಕ್ರಿ.ಶ.



1140 ರ ವೀರಗಲ್ಲಿನ ಶಿಲಾ ಶಾಸನದಲ್ಲಿ ಇದನ್ನು ವಿವರಿಸಲಾಗಿದೆ.

ಹಾಸನಾಂಬೆಯ ಪೂಜಾ ವಿಧಿ

ಹಾಸನಾಂಬೆಯ ಬಾಗಿಲನ್ನು ತೆರೆಯುವ ದಿನ ಎಲ್ಲಾ ತಳವಾರ ಮನೆತನದವರು ಹಾಜರಿರುತ್ತಾರೆ. ಗರ್ಭಗುಡಿಯ ಮುಂದೆ ಬಾಳೆಯ ಕಂದನ್ನು ಅರಸು ಮನೆತನದವರಿಂದ ನೆಟ್ಟು ದೇವಿಯನ್ನು ಭಜಿಸುತ್ತಾ, ಅರಸು ಮನೆತನದವರು ಬಾಳೆ ಕಂದನ್ನು ಕತ್ತರಿಸಿದ ನಂತರವೇ ದೇವಾಲಯದ ಬಾಗಿಲನ್ನು ತೆರೆಯುವುದು ಇಲ್ಲಿನ ಸಂಪ್ರದಾಯ.

ಗರ್ಭಗುಡಿಯ ಬಾಗಿಲನ್ನು ತೆರೆದ ಕೂಡಲೇ ಭಕ್ತರು ಹಾಸನಾಂಬೆಯ ದರ್ಶನ ಮಾಡಬಾರದು ಎನ್ನುವ ನಿಯಮವಿದೆ. ಇದರಿಂದ ಅಪಾಯವಾಗುವ ಸಾಧ್ಯತೆ ಹೆಚ್ಚು ಎನ್ನುವುದು ಜನರ ನಂಬಿಕೆ. ಈ ಕಾರಣಕ್ಕಾಗಿ ದೃಷ್ಟಿ ನಿವಾರಣೆಗೆ ಬಾಳೆ ಮರವನ್ನು ಕಡಿದ ಬಳಿಕ ಮರುದಿನ ಭಕ್ತರಿಗೆ ಪ್ರವೇಶವನ್ನು ನೀಡಲಾಗುತ್ತದೆ.

ಮೊದಲನೇ ದಿನ ಹಾಸನಾಂಬೆಗೆ ಯಾವುದೇ ರೀತಿಯ ಅಲಂಕಾರವನ್ನು ಮಾಡಲಾಗುವುದಿಲ್ಲ. ಎರಡನೇ ದಿನ ದೇವಿಯ ಆಭರಣ, ವಸ್ತ್ರಗಳನ್ನು ಜಿಲ್ಲಾ ಖಜಾನೆಯಿಂದ ಪಲ್ಲಕ್ಕಿಯೊಂದಿಗೆ ದೇವಾಲಯಕ್ಕೆ ತಂದು ತಾಯಿಯನ್ನು ಅಲಂಕರಿಸಿ ಪೂಜೆ ಮಾಡಿ, ನೈವೇದ್ಯವನ್ನು ಅರ್ಪಿಸಲಾಗುತ್ತದೆ. ದೇವಿಯ ವಸ್ತ್ರಗಳನ್ನು ಹುಣಸಿನ ಕೆರೆಯಲ್ಲಿರುವ ಮಡಿವಾಳರು ಒಗೆದ ನಂತರ ಪುರೋಹಿತರು ಮಡಿಯಲ್ಲಿ ಅಮ್ಮನವರ ಮೀಸಲು ಮನೆಯಲ್ಲಿ ನಮಸ್ಕರಿಸಿ ಇಡುತ್ತಾರೆ.

ಬಲಿಪಾಡ್ಯಮಿಯಂದು ತುಪ್ಪದ ದೀಪವನ್ನು ಬೆಳಗಿಸಿ ಹಾಸನಾಂಬೆಯ ಗರ್ಭಗುಡಿಯೊಳಗೆ ಇಡಲಾಗುತ್ತದೆ. ಜೊತೆಗೆ ಬೇಯಿಸಿದ ಅನ್ನವನ್ನು ನೈವೇದ್ಯವಾಗಿ ಹೂಗಳೊಂದಿಗೆ ಇಡಲಾಗುತ್ತದೆ. ಪವಾಡವೆಂದರೆ ಮುಂದಿನ ವರ್ಷ ಬಾಗಿಲು ತೆರೆಯುವವರೆಗೂ ದೀಪ ಉರಿಯುತ್ತಲೇ ಇದ್ದು, ಹೂಗಳು ತಾಜವಾಗಿರುತ್ತದೆ. ಹಾಗೂ ಪ್ರಸಾದವು ಕೂಡಾ ಹಾಳಾಗದೆ ಇರುತ್ತದೆ.

ಕಳ್ಳಪ್ಪನ ಗುಡಿ

ಒಮ್ಮೆ ದೇವಿಯ ವಿಗ್ರಹದ ಆಭರಣಗಳನ್ನು ಕದಿಯಲು ನಾಲ್ಕು ಜನ ಕಳ್ಳರು ದೇವಾಲಯಕ್ಕೆ ಪ್ರವೇಶಿಸಿದರು. ಇದರಿಂದ ಕುಪಿತಳಾದ ದೇವಿಯು ಅವರಿಗೆ ಶಾಪವನ್ನು ನೀಡಿ ಕಲ್ಲಾಗುವಂತೆ ಪರಿವರ್ತಿಸುತ್ತಾಳೆ. ಅಂದಿನಿಂದ ಇದು ಕಳ್ಳಪ್ಪನ ಗುಡಿಯೆಂದೇ ಪ್ರಸಿದ್ಧವಾಗಿದೆ.

ಸಿದ್ಧೇಶ್ವರ ದೇವಾಲಯ

ಹಾಸನಾಂಬೆಯ ದೇವಾಲಯವನ್ನು ಪ್ರವೇಶಿಸಿದ ತಕ್ಷಣವೇ ಕಾಣುವ ದೇವಾಲಯವೇ ಸಿದ್ಧೇಶ್ವರ ದೇಗುಲ. ಲಿಂಗ ರೂಪದ ಈ ಉದ್ಭವ ಮೂರ್ತಿಯು ಈಶ್ವರನು ಅರ್ಜುನನಿಗೆ ಪಾಶುಪತಾಸ್ತ್ರ ಕೊಡುವ ರೀತಿಯಲ್ಲಿದೆ. ಪ್ರತಿ ಅಮಾವಾಸ್ಯೆಯಂದು ರಾವಣೋತ್ಸವ, ಬಲಿಪಾಡ್ಯಮಿಯಂದು ಚಂದ್ರಮಂಡಲ ರಥೋತ್ಸವವು ಇಲ್ಲಿ ನಡೆಯುತ್ತದೆ.

ದಂತಕಥೆ

ಒಂದು ದಂತಕಥೆಯ ಪ್ರಕಾರ ಒಬ್ಬ ಸೊಸೆಗೆ ಆಕೆಯ ಅತ್ತೆಯು ಬಹಳ ಕಷ್ಟ ಕೊಡುತ್ತಿದ್ದಳು. ಆ ಸೊಸೆಯು ಪ್ರತೀ ನಿತ್ಯ ದೇವಸ್ಥಾನಕ್ಕೆ ಬರುತ್ತಿದ್ದಳು. ದೇವತೆಯರು ಅವಳನ್ನು ಮಾತನಾಡಿಸುತ್ತಿದ್ದರು ಮತ್ತು ಈ ವಿಷಯ ಯಾರ ಬಳಿಯೂ ಹೇಳಬಾರದೆಂದು ಹೇಳಿದ್ದರು. ಒಂದು ದಿನ ಸೊಸೆ ದೇಗುಲಕ್ಕೆ ಹೊರಟಾಗ, ಅತ್ತೆ ಅವಳನ್ನು ಹಿಂಬಾಲಿಸಿ ಬಂದು ನೋಡಿದಾಗ ಅಮ್ಮನವರ ಮುಂದೆ ನಿಂತಿದ್ದ ಸೊಸೆಯನ್ನು ಕಂಡು ಸಿಟ್ಟಾಗಿ ತಲೆ ಮೇಲೆ ಕುಟ್ಟಿದಳು, ನೋವಿನಿಂದ ಸೊಸೆಯು 'ಅಮ್ಮ ಹಾಸನಾಂಬೆ' ಎಂದು ಕೂಗಿದಾಗ ದೇವಿಯು ಆಕೆಯ ಭಕ್ತಿಗೆ ಮೆಚ್ಚಿ ನನ್ನ ಸನ್ನಿಧಿಯಲ್ಲೇ ಯಾವಾಗಲೂ ಕಾಣುವಂತಿರು ಎಂದು ಹರಸಿದ್ದರಿಂದ ಸೊಸೆ ಕಲ್ಲಾಗಿ ಬಿಟ್ಟಳು. ಆ ಕಲ್ಲು ಈಗಲೂ ಕಾಣಿಸುತ್ತದೆ. ಆ ಕಲ್ಲು ಪ್ರತೀ ವರ್ಷ ಬತ್ತದ ಕಾಳಿನ ಮೊನೆಯಷ್ಟು ಚಲಿಸುತ್ತದೆ. ಅದು ಸಂಪೂರ್ಣ ಚಲಿಸಿ ದೇವಿ ಪಾದ ತಲುಪಿದ ದಿನ ಕಲಿಯುಗದ ಅಂತ್ಯವೆಂದು ನಂಬಿಕೆ ಇದೆ.



ವಿಶ್ವಾಸ್.ಡಿ.ಗೌಡ
ಸಕಲೇಶಪುರ,
9743636831

ದೇವಸ್ಥಾನದ ಬಾಗಿಲನ್ನು ಮುಚ್ಚುವ ದಿನ ದೇವಿಯರಿಗೆ ಬಳೆ, ಅರಶಿನ, ಕುಂಕುಮ, ಹೂವು ಮುಂತಾದ ಮಂಗಳದ್ರವ್ಯಗಳನ್ನು ಅರ್ಪಿಸಿ ನಂದಾದೀಪವನ್ನು ಹಚ್ಚಿಡುತ್ತಾರೆ. ಮರು ವರ್ಷ ದೇಗುಲದ ಬಾಗಿಲು ತೆರೆಯುವವರೆಗೆ ಆ ಹೂವು ಬಾಡದೆ, ನಂದಾದೀಪ ನಂದದೇ ಹಾಗೆಯೇ ಉರಿಯುತ್ತಿರುತ್ತದೆ. ನಂದಾದೀಪ ಆರಿ, ಹೂವು ಬಾಡಿದ್ದಲ್ಲಿ ಆ ವರ್ಷ ದೇಶಕ್ಕೆ ಆಪತ್ತು ಸಂಭವಿಸುವ ಸೂಚನೆಯಾಗಿರುತ್ತದೆ ಎಂಬ ನಂಬಿಕೆ ಇದೆ.

ತಾಯಿ ಹಾಸನಾಂಬೆಯ ದರ್ಶನಗೈದು ಆಕೆಯ ಕೃಪೆಗೆ ಪಾತ್ರರಾಗೋಣ. ಶುಭವಾಗಲಿ.

# ಯುಪಿ, ಮಹಾರಾಷ್ಟ್ರ ಕಾಲ್ತುಳಿತ ಪ್ರಕರಣಗಳಿಗೆ ಯಾರು ಹೊಣೆ: ಡಿಕೆಶಿ ಪ್ರಶ್ನೆ

**ಬೆಂಗಳೂರು:** ಕಾಲ್ತುಳಿತ ಪ್ರಕರಣದಲ್ಲಿ ನಮ್ಮನ್ನು ಟೀಕೆ ಮಾಡುತ್ತಿರುವ ಬಿಜೆಪಿಯವರನ್ನೂ ಹೊರೋಣ. ಹೆಗಲ ಮೇಲೆ ಕೂರಿಸಿಕೊಂಡು ಮೆರವಣಿಗೆ ಮಾಡೋಣ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವ್ಯಂಗ್ಯವಾಡಿದರು.

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತದ ಹೊಣೆಯನ್ನು ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳೇ ಹೊಣೆ ಹೊರಬೇಕು ಎಂದು ಬಿಜೆಪಿ ಪ್ರತಿಭಟನೆ ಬಗ್ಗೆ ಕೇಳಿದಾಗ ಈ ರೀತಿ ಪ್ರತಿಕ್ರಿಯಿಸಿದರು. ರಾಜ್ಯ ಮಾಲಿನ್ಯ ಮಂಡಳಿ ವಿಶ್ವ ಪರಿಸರ ದಿನದ ಅಂಗವಾಗಿ ಮಂಗಳವಾರ ಹಮ್ಮಿಕೊಂಡಿದ್ದ ಮ್ಯಾರಥಾನ್ ಗೆ ವಿಧಾನಸೌಧದ ಎದುರು ಚಾಲನೆ ನೀಡಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

'ಉತ್ತರ ಪ್ರದೇಶ, ಮಹಾರಾಷ್ಟ್ರ ಹಾಗೂ ಅನೇಕ ರೈಲ್ವೇ ನಿಲ್ದಾಣಗಳಲ್ಲಿ ಕಾಲ್ತುಳಿತ, ಉತ್ತರ ಪ್ರದೇಶದ ದೇವಸ್ಥಾನವೊಂದರಲ್ಲಿ ನೂರಾರು ಜನ ಕಾಲ್ತುಳಿತಕ್ಕೆ ಒಳಗಾಗಿ ಸತ್ತರು. ಇದಕ್ಕೆಲ್ಲಾ ಯಾರು ಹೊಣೆ? ಎರಡು ದಿನದ ಹಿಂದೆ ನಾನು ಅಹಮದಾಬಾದ್ ಗೆ ಹೋಗಿದ್ದೆ. ನಾನೇನಾದರು ಆ ಘಟನೆ ಬಗ್ಗೆ ಕೇಂದ್ರ ಸರ್ಕಾರವನ್ನು ಗುರಿ ಮಾಡಿ ಮಾತನಾಡಿದ್ದೇನೆಯೇ?' ಎಂದು ಪ್ರಶ್ನಿಸಿದರು.

'ಅವರು ಇರುವುದೇ ಹೆಣದ ಮೇಲೆ ರಾಜಕೀಯ ಮಾಡಲು. ಅವರು ಎಲ್ಲಾ ಕಾಲದಿಂದಲೂ ಅದೇ ಕೆಲಸ ಮಾಡುತ್ತಿದ್ದಾರೆ. ಬಂದ್ ವೇಳೆಯಲ್ಲಿ, ಗಂಗಾಧರ್ ಕೊಲೆ ಪ್ರಕರಣ ಸೇರಿದಂತೆ ಬೇಕಾದಷ್ಟು ಸಮಯದಲ್ಲಿ ಇದೇ ರೀತಿ ಮಾಡಿದ್ದಾರೆ' ಎಂದರು.

'ಕಾಲ್ತುಳಿತ ಪ್ರಕರಣದಲ್ಲಿ ಯಾರ್ಯಾರಿಗೆ ಶಿಕ್ಷೆ ಕೊಡಬೇಕೋ ಆ ಕೆಲಸವನ್ನು ಸರ್ಕಾರ ಮಾಡಿದೆ. ತನಿಖೆಗಾಗಿ ಏಕ ಸದಸ್ಯ ಆಯೋಗವನ್ನು ಸಹ ನೇಮಕ ಮಾಡಲಾಗಿದೆ. ಇಡೀ ದೇಶದಲ್ಲಿ ನೂರಾರು ಘಟನೆಗಳು ನಡೆದಿವೆ. ಆದರೂ ಕಾಂಗ್ರೆಸ್ ಪಕ್ಷ ಎಂದಿಗೂ ಹೆಣದ ಮೇಲೆ ರಾಜಕೀಯ ಮಾಡಿಲ್ಲ' ಎಂದು ಹೇಳಿದರು.

'ಅವರ ರಾಜಕೀಯ ತಳಹದಿ ಹಾಳಾಗಿರುವ ಕಾರಣಕ್ಕೆ ಈ ರೀತಿಯ ಆಪಾದನೆಗಳನ್ನು ಮಾಡುತ್ತಿದ್ದಾರೆ. ತಮ್ಮ ಅಸ್ತಿತ್ವ ಇನ್ನೂ ಇದೇ ಎಂದು ತೋರಿಸಿಕೊಳ್ಳಲು ಸರ್ಕಸ್ ಮಾಡುತ್ತಿದ್ದಾರೆ. ಜನ ಸಾಮಾನ್ಯರು ಅವರ ಜೊತೆಯಿಲ್ಲ' ಎಂದು ಲೇವಡಿ ಮಾಡಿದರು.

ಬಿಜೆಪಿ ಕೇವಲ ಶಿವಕುಮಾರ್ ಅವರನ್ನು ಮಾತ್ರ ಗುರಿ ಮಾಡುತ್ತಿದೆಯೇ ಎಂದು ಕೇಳಿದಾಗ, "ಯಾರು ಹೆಚ್ಚು ಬಲವುಳ್ಳವರೋ ಅವರಿಗೆ ಶತ್ರುಗಳು ಜಾಸ್ತಿ. ಕಡಿಮೆ ಬಲ ಇದ್ದರೆ ಕಡಿಮೆ ಶತ್ರುಗಳು, ಬಲವೇ ಇಲ್ಲದಿದ್ದರೇ ಶತ್ರುಗಳೇ ಇಲ್ಲ. ಅವರಿಗೆ ನಮ್ಮನ್ನು ಕಂಡರೆ ಭಯ. ನೀವು (ಮಾಧ್ಯಮಗಳು) ನಮ್ಮ ಜೊತೆ ಇದ್ದರೆ 2028 ಕ್ಕೆ ಮತ್ತೆ ವಿಧಾನಸೌಧದಲ್ಲಿ ಪ್ರಮಾಣ ವಚನ ಸ್ವೀಕಾರ ಮಾಡುತ್ತೇವೆ" ಎಂದರು. ಸಿಎಂ ಆಗಿ ಪ್ರಮಾಣವಚನ ಸ್ವೀಕಾರ ಮಾಡುವಿರಾ ಎಂದಾಗ, "ಕಾಂಗ್ರೆಸ್ ಸರ್ಕಾರ ಪ್ರಮಾಣ ವಚನ ಸ್ವೀಕಾರ ಮಾಡುತ್ತದೆ" ಎಂದು ಹೇಳಿದರು.

ಕಸದ ಮಾಫಿಯಾಕ್ಕೆ ಹೆದರುವುದಿಲ್ಲ; ಹೊಸಬರಿಗೆ ಅವಕಾಶ

ಕಸ ವಿಲೇವಾರಿ ಮರು ಟೆಂಡರ್ ಗೆ ಹೈಕೋರ್ಟ್ ಮಧ್ಯಂತರ ತಡೆ ನೀಡಿರುವ ಬಗ್ಗೆ ಕೇಳಿದಾಗ, 'ನಗರವನ್ನು ಸ್ವಚ್ಛ ಮಾಡಲಿಲ್ಲ ಎಂದರೆ ಹೇಗೆ? ಈ ತೀರ್ಪಿನ ಬಗ್ಗೆ ನಾನು ಪರಿಶೀಲನೆ ಮಾಡುತ್ತೇನೆ. ಈ ಮೊದಲು 89 ಟೆಂಡರ್ ಗಳಾಗಿದ್ದವು. ಅವರೆಲ್ಲರು ಸೇರಿ ತಮ್ಮದೇ ಗುಂಪು ಮಾಡಿಕೊಂಡಿದ್ದಾರೆ. ಇದೊಂದು ಮಾಫಿಯಾ. ಇವರುಗಳು ನಮ್ಮ ದಾರಿ ತಪ್ಪಿಸುತ್ತೇವೆ ಎಂದು ಕೊಂಡಿದ್ದಾರೆ. ಇದರ ಬಗ್ಗೆ ನ್ಯಾಯಾಲಯಕ್ಕೆ ಅರ್ಥ ಮಾಡಿಸುವ ಕೆಲಸ ಮಾಡುತ್ತೇವೆ' ಎಂದರು.

'ಏನೇ ಕೆಲಸ ಮಾಡಲು ಹೋದರು ಪಿಐಎಲ್ ಹಾಕುವುದು, ತಡೆ-ಯಾಜ್ಞೆ ತರುವುದು ಹೀಗೆ ಬೆದರಿಕೆ ತಂತ್ರಗಳನ್ನು ಒಂದಷ್ಟು ಗುಂಪು ಮಾಡುತ್ತಿದೆ. ಈ ಸರ್ಕಾರದಲ್ಲಿ ಇದೆಲ್ಲವೂ ನಡೆಯುವುದಿಲ್ಲ. ಹಳಬರನ್ನು ಕಿತ್ತು ಬಿಸಾಕಿ ಹೊಸಬರಿಗೆ ಅವಕಾಶ ನೀಡಲಾಗುವುದು' ಎಂದರು.

# ಪಿತೃಪಕ್ಷ ಪೂಜೆ ಮಾಡುವ ಮುನ್ನ ಎಲ್ಲರೂ ತಿಳಿಯಲೇಬೇಕಾದ ವಿಚಾರಗಳಿವು



ಹಿಂದೂ ಧರ್ಮದಲ್ಲಿ ಹಿರಿಯರು ಹಾಗೂ ಪೂಜ್ಯರಿಗೆ ಶ್ರದ್ಧಾಂಜಲಿ ಸಲ್ಲಿಸುವ, ನಮ್ಮ ಪ್ರೀತಿಪಾತ್ರರು ನಮ್ಮನ್ನು ತೊರೆದಾಗ ಅವರ ಆತ್ಮಕ್ಕೆ ಪ್ರಾರ್ಥನೆ ಸಲ್ಲಿಸಲು ವಿಶೇಷ ಸಮಯ ಪಿತೃ ಪಕ್ಷ. ಹದಿನಾರು ದಿನಗಳ ಈ ಪಿತೃ ಪಕ್ಷದ ಅವಧಿಯಲ್ಲಿ ಮೃತರ ಆತ್ಮಕ್ಕೆ ನೆಮ್ಮದಿ ಸಿಗಲಿ, ಅವರ ಪುನರ್ಜನ್ಮ ಮತ್ತು ಶಾಶ್ವತವಾಗಿ ಈ ವಿಶ್ವದಿಂದ ಮುಕ್ತ ಹರಿವಿಗೆ ತರ್ಪಣವನ್ನು ನೀಡುವುದು ಪದ್ಧತಿ.

ಈ ಸಮಯದಲ್ಲಿ ತಪ್ಪದೇ ನಮ್ಮ ಹಿರಿಯರಿಗೆ ಪೂಜೆ ಸಲ್ಲಿಸುವುದು ಕಡ್ಡಾಯ. ಮಹಾಲಯ ಅಮಾವಾಸ್ಯೆಯ ಮಹತ್ವ ಮಹಾಲಯ ಅಮಾವಾಸ್ಯೆಯು ಪಿತೃ ಪಕ್ಷದ ಅಂತ್ಯ ಎನ್ನಲಾಗುತ್ತದೆ.

ಹಿರಿಯರನ್ನು ನೆನದು ಅವರಿಗೆ ಪೂಜಿಸಿ ತರ್ಪಣ ಬಿಡುವ ಈ ಪಿತೃಪಕ್ಷದ ಮಹತ್ವ ಏನು, ಇದರ ಬಗ್ಗೆ ನೀವು ತಿಳಿಯಲೇಬೇಕಾದ ಕೆಲವು ಪ್ರಮುಖ ಸಂಗತಿಗಳು:

1. ಪಕ್ಷ ಎಂದರೇನು ?

ಭಾದ್ರಪದ ಬಹುಳ ಪಾಡ್ಯದಿಂದ ಅಮಾವಾಸ್ಯೆಯ ತನಕ 15 ದಿನಗಳ ಈ ಕಾಲವನ್ನು 'ಪಿತೃ ಪಕ್ಷ' 'ಪಕ್ಷಮಾಸ' ಎನ್ನುತ್ತಾರೆ. ಯಾರು ಈ ಅವಧಿಯಲ್ಲಿ ಶ್ರಾದ್ಧವನ್ನು ಮಾಡುತ್ತಾರೋ ಅವರಿಗೆ ಪಿತೃಗಳು ಜ್ಞಾನ, ಭಕ್ತಿ, ಸಂಪತ್ತು ಮೊದಲಾದ ಆಶೀರ್ವಾದ ಮಾಡುತ್ತಾರೆ, ಮಾಡದವರಿಗೆ ಶಾಪವನ್ನು ನೀಡುತ್ತಾರೆ, ಪಿತೃಗಳ ಶಾಪದಿಂದ ವಂಶಾಭಿವೃದ್ಧಿ ಆಗುವುದಿಲ್ಲ ಎಂಬ ನಂಬಿಕೆ ಇದೆ.

2. ಮಹಾಲಯ ಅಮಾವಾಸ್ಯೆಯ ಅರ್ಥವೇನು?

ಮಹಾಲಯ ಅಂದರೆ - 'ಮಹಾ' - ದೊಡ್ಡ 'ಲಯ' - ನಾಶ - ಸಮುದ್ರ ಮಂಥನ ಸಂದರ್ಭದಲ್ಲಿ ಬಹಳ ಋಷಿಗಳು ಮತ್ತು ದೇವತೆಗಳು ದೈತ್ಯರಿಂದ ಸಂಹರಿಸಲ್ಪಟ್ಟರು. ಈ ಋಷಿಗಳು ನಮ್ಮ ಪೂರ್ವಜರಾಗಿದ್ದುದರಿಂದ ಅವರ ನೆನಪಿನಲ್ಲಿ ಮಹಾಲಯ ಪಕ್ಷವನ್ನು ಆಚರಿಸುತ್ತೇವೆ. ಅದುವೇ ಸರ್ವಪಿತೃ ಅಮಾವಾಸ್ಯೆ.

ಮಹಾಲಯ ಅಮಾವಾಸ್ಯೆ ಎಂದು ಕರೆಯಲ್ಪಡುವ ಅಮವಾಸ್ಯೆಯು ಅಗಲಿದ ಆತ್ಮಗಳಿಗೆ ಸಮರ್ಪಿತವಾಗಿದೆ. ನೀವು ಈ ದೇಹವನ್ನು ತೊರೆದಾಗ ಪುರೂರವ, ವಿಶ್ವದೇವ ಎಂಬ ದೇವತೆಗಳಿಂದ ಇನ್ನೊಂದು ಜಗತ್ತಿಗೆ ಮಾರ್ಗದರ್ಶನ ಪಡೆಯುತ್ತೀರಿ. ಅವರು ಬಂದು ನಿಮ್ಮನ್ನು ಒಂದು ಹಂತದಿಂದ ಇನ್ನೊಂದು ಹಂತಕ್ಕೆ ಮಾರ್ಗದರ್ಶನ ಮಾಡುತ್ತಾರೆ. ಮಹಾಲಯ ಅಮಾವಾಸ್ಯೆಯು ನೀವು ಅಗಲಿದ ಎಲ್ಲ ಆತ್ಮಗಳನ್ನು ನೆನಪಿಸಿಕೊಂಡು ಅವರಿಗೆ ಧನ್ಯವಾದಗಳನ್ನು ಅರ್ಪಿಸುವ ಮತ್ತು ಅವರಿಗೆ ಶಾಂತಿಯನ್ನು ಬಯಸುವ ದಿನವಾಗಿದೆ.

3. ಪಿತೃಗಳಿಗೆ ತಿಲ ತರ್ಪಣವೇಕೆ ಮತ್ತು ಮಹಾಲಯ ಅಮಾವಾಸ್ಯೆ ಏಕೆ ಹೆಚ್ಚು ಮಹತ್ವದ ದಿನ:?

ಸೋಮ ದೇವನಿಗೆ ಎಳ್ಳು ಬಹಳ ನೆಚ್ಚಿನ ಆಹಾರ, ಅವು ಅವನ ವೃದ್ಧಿಗೂ ಕಾರಣವಾಗಿವೆ, ಅಲ್ಲದೇ ಚಂದ್ರನೇ ಪಿತೃಗಳಿಗೆ ಆಧಾರ. ಪಿತೃಲೋಕ ಚಂದ್ರನ ಮೇಲ್ಭಾಗದಲ್ಲಿದೆ. ಚಂದ್ರನ ಕಲೆಗಳೆ ಪಿತೃಗಳಿಗೆ ಆಹಾರ. ಆದ್ದರಿಂದ ಚಂದ್ರನಿಗೆ ಪ್ರಿಯವಾದ ಎಳ್ಳು ಪಿತೃದೇವತೆಗಳಿಗೂ ಪ್ರಿಯವಾಗಿವೆ.

ಭೂಮಿಯಲ್ಲಿ ಸೂರ್ಯನ ಚಲನೆಗೆ ಅನುಗುಣವಾಗಿ ರಾತ್ರಿ, ಹಗಲಾಗುವಂತೆ ಪಿತೃಲೋಕದಲ್ಲೂ ಸೂರ್ಯನ ಚಲನೆ ಕಾರಣವಾಗಿವೆ. ಭೂಮಿಯಲ್ಲಿ 24 ಘಂಟೆಗೆ ಒಂದು ದಿನವಾದರೆ ಚಂದ್ರನಲ್ಲಿ 15 ದಿನ ಹಗಲು 15 ದಿನ ರಾತ್ರಿಯಾದರೆ 1 ದಿನವಾಗುವುದು.

ಶುಕ್ಲಪಕ್ಷದ ಅಷ್ಟಮಿಯಿಂದ ಕೃಷ್ಣಪಕ್ಷದ ಅಷ್ಟಮಿಯವರೆಗೆ ಪಿತೃಗಳಿಗೆ ರಾತ್ರಿಯಾದರೆ, ಕೃಷ್ಣಪಕ್ಷದ ಅಷ್ಟಮಿಯಿಂದ ಶುಕ್ಲ ಪಕ್ಷದ ಅಷ್ಟಮಿಯವರೆಗೆ ಹಗಲು. ಅಂದರೆ ನಮ್ಮ ಒಂದು ತಿಂಗಳು ಪಿತೃಗಳಿಗೆ ಒಂದು ದಿನ. ಆಗ ಪಿತೃಗಳಿಗೆ ಅಮಾವಾಸ್ಯೆ ನಡು ಮಧ್ಯಾಹ್ನವೆನಿಸುತ್ತದೆ. ಆದ್ದರಿಂದ ಅಮಾವಾಸ್ಯೆಯಂದು ಪಿತೃಗಳಿಗೆ ತಿಲ ತರ್ಪಣಕ್ಕೆ ಮಹತ್ವ. ದಕ್ಷಿಣಾಯಣದ ಕನ್ಯಾಮಾಸದಲ್ಲಿ ಸೂರ್ಯನು ಭೂಮಿಗೆ ಅತಿ ಸಮೀಪದಲ್ಲಿರುವುದರಿಂದ ಪಿತೃಪಕ್ಷದಲ್ಲಿ ತರ್ಪಣ ಶ್ರಾದ್ಧಕ್ಕೆ ಹೆಚ್ಚಿನ ಮಹತ್ವವಿದೆ.

4. ಪಿತೃಪಕ್ಷದ ಪೌರಾಣಿಕ ಹಿನ್ನೆಲೆ

ಮಹಾಭಾರತ ಪುರಾಣದ ಪ್ರಕಾರ ಕರ್ಣ ಯುದ್ಧದಲ್ಲಿ ಹತನಾಗಿ ಸ್ವರ್ಗ ಸೇರಿದಾಗ ಅವನಿಗೆ ಬಂಗಾರ ಮತ್ತು ಆಭರಣಗಳನ್ನು ಆಹಾರವಾಗಿ ನೀಡಲಾಯಿತು. ಆದರೆ ಕರ್ಣನಿಗೆ ಬೇಕಾಗಿದ್ದು ನಿಜವಾದ ಆಹಾರ. ಇದರಿಂದ ಬೇಸತ್ತ ಕರ್ಣ ಇಂದ್ರನಲ್ಲಿ ಕೇಳುತ್ತಾನೆ, ಆಗ ಇಂದ್ರ ಹೇಳುತ್ತಾನೆ 'ನೀನು ನಿನ್ನ ಪೂರ್ವಿಕರಿಗೆ ಅವರ ಶ್ರಾದ್ಧದಲ್ಲಿ ಅನ್ನವನ್ನು ದಾನವಾಗಿ ನೀಡಿಲ್ಲ. ಜೀವಮಾನ ಪೂರ್ತಿ ಬೇಕಾದಷ್ಟು ಬಂಗಾರಾದಿ ಆಭರಣಗಳನ್ನು ದಾನವಾಗಿ ನೀಡಿದ್ದೇ. ಅದಕ್ಕಾಗಿ ನಿನಗೆ ನಿಜವಾದ ಆಹಾರ ದೊರಕುತ್ತಿಲ್ಲ'.

ತನಗೆ ತನ್ನ ಪೂರ್ವಜರ ಬಗ್ಗೆ ಏನೂ ಗೊತ್ತಿಲ್ಲದಿದ್ದರಿಂದ ಯಾವ ಶ್ರಾದ್ಧವನ್ನು ಮಾಡಲಾಗಿಲ್ಲ ಎಂದು ಕರ್ಣ ಹೇಳುತ್ತಾನೆ. ಇದಕ್ಕಾಗಿ ಅವನಿಗೆ ವಿಶೇಷವಾಗಿ ಪರಿಹಾರ ರೂಪವಾಗಿ 15 ದಿನಗಳ ಕಾಲ ಭೂಲೋಕಕ್ಕೆ ಹೋಗಿ ಶ್ರಾದ್ಧ ಮಾಡಿ ಅವರ ನೆನಪಿನಲ್ಲಿ ಆಹಾರವನ್ನು ದಾನ ಮಾಡಲು ಅನುಮತಿ ನೀಡುತ್ತಾರೆ. ಆ ಕಾಲಕ್ಕೆ ಪಕ್ಷಮಾಸವೆನ್ನುತ್ತಾರೆ ಎಂಬುದು ಒಂದು ಪೌರಾಣಿಕ ಹಿನ್ನೆಲೆ.

5. ಶ್ರಾದ್ಧದ ಮಹತ್ವ

ಶ್ರಾದ್ಧ ' ಎಂದರೆ ' ಶ್ರದ್ಧಯಾ ಕ್ರೀಯತೇ ಕರ್ಮ ಇತಿ ಶ್ರಾದ್ಧಮ್ ' - ಶ್ರದ್ಧೆಯಿಂದ ಆಚರಿಸುವ ಕಾರ್ಯವೇ 'ಶ್ರಾದ್ಧ' ಎಂದು ಕರೆಸಿಕೊಳ್ಳುತ್ತದೆ. ಅತ್ಯಂತ ನಿಷ್ಠೆಯಿಂದ ಪಿಂಡ ಪ್ರದಾನ ಮಾಡಿ ಪಿತೃ ದೇವತೆಗಳ ಅಂತರ್ಯಾಮಿಯಾದ ಶ್ರೀ ಜನಾರ್ದನ ರೂಪಿ ಭಗವಂತನನ್ನು ತೃಪ್ತಿ ಪಡಿಸಬೇಕು. ಇದರಿಂದ ತನ್ನ ಪಿತೃಗಳಿಗೆ ಸದ್ಗತಿಯು ದೊರೆಯಲಿದೆಯೆಂದು ಪ್ರಾರ್ಥಿಸಬೇಕು.

ಕರ್ಮಭೂಮಿ ಎನಿಸಿದ ಈ ಭರತ ಖಂಡದ ಸನಾತನ ಧರ್ಮಗಳಲ್ಲಿ 'ಶ್ರಾದ್ಧ' ಕರ್ಮವು ಮುಖ್ಯವಾಗಿದೆ. ಇದು ಅತ್ಯಂತ ಶ್ರೇಯಸ್ಕರವಾದ ಕರ್ಮವಾಗಿದೆ. ಇದನ್ನು 'ಪಿತೃ ಯಜ್ಞ' ಎಂದು ಕರೆಯುತ್ತಾರೆ.

6. ಶ್ರಾದ್ಧಾ ಪೂಜೆ ವೇಳೆ ಈ ನಿಯಮಗಳನ್ನು ತಪ್ಪದೇ ಪಾಲಿಸಿ

ಅಕಾಲಿಕವಾಗಿ ಮೃತಪಟ್ಟವರ ಸಾವು ನಮಗೆ ನೋವು ಮತ್ತು ಸಂಕಟಗಳನ್ನು ನೀಡುತ್ತದೆ ಹಾಗೂ ಅವರ ದೇಹವು ಸಾಯುತ್ತದೆ ಆದರೆ ಆತ್ಮಗಳು ಸಾಯುವುದಿಲ್ಲ ಎಂದು ಹೇಳಲಾಗುತ್ತದೆ. ಈ ಬ್ರಹ್ಮಾಂಡದ ಕೊನೆಯವರೆಗೂ ಆತ್ಮಗಳು ಇರುತ್ತವೆ ಮತ್ತು ಯಾರಾದರೂ ಅಕಾಲಿಕ ಮರಣದಿಂದ ಸತ್ತರೆ ಹೊಸ ಜನ್ಮದ ರೂಪದಲ್ಲಿ ಇನ್ನೊಂದು ಜನ್ಮವನ್ನು ತೆಗೆದುಕೊಳ್ಳಲು ಮುಕ್ತರಾಗಬೇಕು ಎಂಬ ನಂಬಿಕೆ ಇದೆ. ಅತೃಪ್ತ ಆತ್ಮವು ತನ್ನ ಕುಟುಂಬ ಸದಸ್ಯರಿಗಿಂತ ಹೆಚ್ಚು ನೋವಿನಿಂದ ಕೂಡಿದೆ ಆದ್ದರಿಂದ ಈ ಅಮರ ಪ್ರಪಂಚದಿಂದ ಅದನ್ನು ಪುನರುಜ್ಜೀವನಗೊಳಿಸುವ ಜವಾಬ್ದಾರಿ ಅವರ ಕುಟುಂಬ ಸದಸ್ಯರ ಮೇಲಿದೆ.

ಹಿಂದೂ ಧರ್ಮದಲ್ಲಿ, ನಮ್ಮ ಆಪ್ತರು ನಮ್ಮನ್ನು ತೊರೆದಾಗ ಅವರ ಆತ್ಮಕ್ಕೆ ಪ್ರಾರ್ಥನೆ ಸಲ್ಲಿಸಲು 13 ದಿನಗಳಲ್ಲಿ ಪೂಜೆ ಸಲ್ಲಿಸುವ ಪದ್ಧತಿ ಇದೆ. ಆದರೆ ಒಬ್ಬ ವ್ಯಕ್ತಿಯು ಅಕಾಲಿಕ ಮರಣವನ್ನು ಅನುಭವಿಸಿದಾಗ, 13 ದಿನಗಳ ಪ್ರಕ್ರಿಯೆಗೆ ಸಲಹೆ ನೀಡಲಾಗುವುದಿಲ್ಲ. ಜನರು ಭಾದ್ರಪದ ತಿಂಗಳಲ್ಲಿ ಅಂದರೆ ಮಾಸದ ಕೃಷ್ಣ ಪಕ್ಷ, ತಿಂಗಳ ದ್ವಿತೀಯಾರ್ಧದಲ್ಲಿ ಪಿತೃ ಪಕ್ಷ ಪೂಜೆಯನ್ನು ಮಾಡುತ್ತಾರೆ.

7. ಪಿತೃ ಪಕ್ಷ ಪೂಜೆಯ ಮಹತ್ವ

ಗರುಡ ಪುರಾಣದ ಪ್ರಕಾರ, ಒಬ್ಬ ವ್ಯಕ್ತಿಯ ಸಾವಿನ ಮೊದಲ ವರ್ಷದಲ್ಲಿ ಶ್ರಾದ್ಧ ಆಚರಣೆಗಳನ್ನು ಮಾಡಲು ಸೂಚಿಸಲಾಗಿದೆ ಏಕೆಂದರೆ ಸಾವಿನ ನಂತರ ಒಂದು ವರ್ಷದ ನಂತರ ಅವರಿಗೆ ತಿನ್ನಲು ಆಹಾರ ಪಡೆಯುತ್ತಾರೆ. ಮೊದಲ ವರ್ಷದಲ್ಲಿ ಈ ಪಿತೃಪಕ್ಷದಲ್ಲಿ ನಾವು 13 ದಿನಗಳ ಕಾಲ ಆಹಾರ ನೀಡಬೇಕು ಎಂದು ನಂಬಲಾಗಿದೆ. ಒಬ್ಬ ವ್ಯಕ್ತಿಯು 13 ದಿನಗಳ ನಿರ್ಗಮನ ಮಾಡಿದಾಗ ಅದರ ಕುಟುಂಬದ ಸದಸ್ಯರು ಅಂತ್ಯ ಸಂಸ್ಕಾರವನ್ನು ಮಾಡುತ್ತಾರೆ ಮತ್ತು ಅವರಿಗೆ ಆಹಾರವನ್ನು ನೀಡಲಾಗುತ್ತದೆ. 13 ದಿನಗಳ ನಂತರ ಆತ್ಮವು ತನ್ನ ಪ್ರಯಾಣವನ್ನು ಆರಂಭಿಸುತ್ತದೆ ಮತ್ತು ಹನ್ನೊಂದು ತಿಂಗಳಲ್ಲಿ ಯಮಲೋಕವನ್ನು ತಲುಪುತ್ತದೆ ಮತ್ತು ಕೊನೆಯ ಒಂದು ತಿಂಗಳಲ್ಲಿ ಅವರು ಯಮನ ಆಸ್ಥಾನವನ್ನು ತಲುಪುತ್ತಾರೆ. ಆಗ ಮಾತ್ರ ಅವನಿಗೆ ತಿನ್ನಲು ಆಹಾರ ಸಿಗುತ್ತದೆ. ಈ ಕಾರಣದಿಂದ ಶ್ರಾದ್ಧ ಮಾಡುವುದು ಬಹಳ ಮುಖ್ಯ ಎನ್ನಲಾಗುತ್ತದೆ.

8. ಎಳ್ಳು ಮತ್ತು ಅಕ್ಕಿಯ ಅರ್ಥ

ಪುರಾತನ ಸಂಪ್ರದಾಯದ ಪ್ರಕಾರ ಕುಟುಂಬದ ಸದಸ್ಯರು ಎಳ್ಳು ಮತ್ತು ಅಕ್ಕಿಯನ್ನು ತೆಗೆದುಕೊಂಡು ತಮ್ಮ ಪೂರ್ವಜರನ್ನು ಪ್ರಾರ್ಥಿಸುತ್ತಾ 'ನೀವು ತೃಪ್ತರಾಗಿರಬಹುದು, ನೀವು ತೃಪ್ತರಾಗಿರಬಹುದು, ನೀವು ತೃಪ್ತರಾಗಬಹುದು'. ಇದನ್ನು ಮೂರು ಬಾರಿ ಹೇಳಿ ಮತ್ತು ನಂತರ ಅವರು ಸ್ವಲ್ಪ ಎಳ್ಳಿನ ಕಾಳುಗಳನ್ನು ನೀರಿನಲ್ಲಿ ಬಿಡುತ್ತಾರೆ.

ಈ ಆಚರಣೆಯ ಮಹತ್ವವೆಂದರೆ ಅಗಲಿದವರಿಗೆ ಹೇಳುವುದು - ನಿಮ್ಮ ಮನಸ್ಸಿನಲ್ಲಿ ಇನ್ನೂ ಕೆಲವು ಆಸೆಗಳಿದ್ದರೆ, ಅವು ಎಳ್ಳಿನಂತೆ ಎಂದು ತಿಳಿಯಿರಿ. ಅವು ಗಮನಾರ್ಹವಲ್ಲ, ಅವುಗಳನ್ನು ಬಿಡಿ. ನಾವು ನಿಮಗಾಗಿ ಅವುಗಳನ್ನು ನೋಡಿಕೊಳ್ಳುತ್ತೇವೆ. ನೀವು ಮುಕ್ತ, ಸಂತೋಷ ಮತ್ತು ತೃಪ್ತರಾಗಿರುತ್ತೀರಿ ಎಂದು ಹೇಳುವ ಪದ್ಧತಿ ಇದೆ.

ತರ್ಪಣ ಎಂದರೆ ಅಗಲಿದವರಿಗೆ ತೃಪ್ತಿಯನ್ನು ತರುವುದು. ಅವರಿಗೆ ತೃಪ್ತಿ ಮತ್ತು ಮುಂದೆ ಸಾಗುವಂತೆ ಹೇಳಲು ಇದನ್ನು ಮಾಡಲಾಗುತ್ತದೆ. ನೀರು ಪ್ರೀತಿಯ ಸಂಕೇತ. ಯಾರಿಗಾದರೂ ನೀರು ಕೊಡುವುದು ಎಂದರೆ ಪ್ರೀತಿಯನ್ನು ನೀಡುವುದು.

9. ದರ್ಬೆಯನ್ನು ಪವಿತ್ರ ಎನ್ನಲು ಕಾರಣವೇನು?

ದರ್ಬೆ, ಕುಶ, ಬರ್ಹಿ, ಇವುಗಳು ಪವಿತ್ರ ದರ್ಬೆಯ ವಿವಿಧ ನಾಮಗಳು. ಒಮ್ಮೆ ಗರುಡನು ತನ್ನ ತಾಯಿಯಾದ ವಿನುತೆಗೆ, ಸರ್ಪಗಳ ತಾಯಿಯಾದ ಕದ್ರುವಿನಿಂದ ಮುಕ್ತಿ ಪಡೆಯಲು ದೇವೇಂದ್ರನಿಂದ ಅಮೃತವನ್ನು ಪಡೆದು ಅದನ್ನು ಸರ್ಪಗಳಿಗೆ ನೀಡುವುದಕ್ಕಾಗಿ ಸ್ನಾನ ಮಾಡಿ ಶುದ್ಧವಾಗಿ ಬರಲು ಹೇಳುತ್ತಾನೆ. ಮತ್ತು ಆ ಸರ್ಪಗಳು ಪುನಃ ಬರುವವರೆಗೂ ಅಮೃತವನ್ನು ದರ್ಬೆಯ ಮೇಲೆ ಇಟ್ಟಿರುತ್ತಾನೆ. ಅಷ್ಟರಲ್ಲಿ ದೇವೇಂದ್ರನು ಬಂದು ಅಮೃತವನ್ನು ಹೊತ್ತುಕೊಂಡು ಹೋಗುವಾಗ ಅಮೃತದ ಒಂದು ಬಿಂದು ದರ್ಬೆಯ ಮೇಲೆ ಬೀಳುತ್ತದೆ. ಆದ್ದರಿಂದ ದರ್ಬೆಯು ಶುದ್ಧವಾಗಿದೆ ಮತ್ತು ಪವಿತ್ರವೆನಿಸಿದೆ.

10. ಭೂಮಿಗೆ ಬರುವ ದುರ್ಗಾ ದೇವಿ

ಈ ಸಮಯದಲ್ಲಿ ದುರ್ಗಾ ದೇವಿಯು ಭೂಮಿಗೆ ಇಳಿಯುತ್ತಾಳೆ ಎಂದು ನಂಬಲಾಗಿದೆ. ಪೂರ್ವಜರ ಸಾವಿನ ಸಮಯ, ದಿನಾಂಕ ಮತ್ತು ಸ್ವಭಾವವನ್ನು ಲೆಕ್ಕಿಸದೆ ಶ್ರಾದ್ಧವನ್ನು ಮಾಡುವ ಮೂಲಕ ಒಬ್ಬನು ತನ್ನ ಪೂರ್ವಜರಿಗೆ ಕರ್ತವ್ಯವನ್ನು ಪೂರೈಸುವ ದಿನ ಇದು. ಒಂದು ವೇಳೆ ಪಿತೃಪಕ್ಷದ ಇತರ ಎಲ್ಲಾ ದಿನಗಳಲ್ಲಿ ಆಚರಣೆಗಳನ್ನು ಮಾಡಲು ಸಾಧ್ಯವಾಗದಿದ್ದರೆ, ಮಹಾಲಯ ಅಮಾವಾಸ್ಯೆಯಂದು ಇದನ್ನು ಮಾಡಬಹುದು. ಕೆಲವರು ಕುಟುಂಬ ಸದಸ್ಯರು ಸಮಾಧಿ ಸ್ಥಳಕ್ಕೆ ಭೇಟಿ ನೀಡಿ ಅದನ್ನು ಸ್ವಚ್ಛಗೊಳಿಸುವುದು ಮತ್ತು ಪಿತೃ ಪಕ್ಷ ಪೂಜೆ ಮಾಡುವುದು ಮತ್ತು ಆ ದಿನ ಮೃತರನ್ನು ಸಮಾಧಾನಪಡಿಸಲು ವಿವಿಧ ಆಹಾರ ಪದಾರ್ಥಗಳನ್ನು ನೀಡುವುದು ಸಾಮಾನ್ಯವಾಗಿದೆ.

PELATRO
Be Relevant
CIN: L72100KA2013PLC068239

## PELATRO LIMITED

Bizz Hub Elanz, 5th Floor 144, MSR North Tower, Outer Ring Road
MSR North City, Near Manyata Tech Park Nagavara, Bengaluru - 560045
Tel: +91 80 6534 9800; hello@pelatro.com; www.pelatro.com

### NOTICE OF THE ANNUAL GENERAL MEETING AND E-VOTING INFORMATION

Notice is hereby given that the Annual General Meeting (AGM) of the Members of Pelatro Limited (the "Company") will be held on **Friday, July 11, 2025 at 11:00 A.M. IST** through Video Conferencing / Other Audio-Visual Means ("VC/OAVM") to transact the businesses as set out in the Notice calling AGM. In compliance with General Circular Nos. 14/2020 dated April 08, 2020, 17/2020 dated April 13, 2020, 22/2020 dated June 15, 2020, 33/2020 dated September 28, 2020, 39/2020 dated December 31, 2020, 10/2021 dated June 23, 2021, 20/2021 dated December 08, 2021, 3/2022 dated 5 May, 2022, 11/2022 dated December 28, 2022 and 09/2023 dated September 25, 2023 issued by the Ministry of Corporate Affairs ("MCA") and SEBI/HO/CFD/PoD-2/P/CIR/2023/167 dated October 07, 2023 issued by Securities and Exchange Board of India (hereinafter collectively referred to as "Circulars"), companies are allowed to hold AGMs through VC, without the physical presence of Members at a common venue. Hence, the AGM of the Company is being held through VC to transact the business as set forth in the Notice of the AGM dated June 17, 2025.

In compliance with the Circulars, electronic copies of the Notice of the AGM have been sent to all the Members whose email IDs are registered with the Company/Depository Participants/Registrar & Share Transfer Agent. These documents are also available on the website of the Company www.pelatro.com, Stock Exchange websites at www.nseindia.com and on the website of Bigshare Services Pvt Ltd, the Company's Registrar & Share Transfer Agents (RTA) at https://evoting.bigshareonline.com/. The dispatch of Notice of the AGM through emails has been completed on June 17, 2025.

Members holding shares as on the cut-off date (July 04, 2025), may cast their votes on the business as set forth in the Notice of the AGM through the electronic voting system of RTA (remote e-voting'). Members are hereby informed that:

i) The business as set forth in the Notice of the AGM may be transacted through remote e-voting or e-voting system at the AGM;
ii) The remote e-voting shall commence on **Tuesday, July 08, 2025 (9:00 A.M. IST)**;
iii) The remote e-voting shall end on **Thursday, July 10, 2025 (5:00 P.M. IST).**
iv) Remote e-voting module will be disabled after 5:00 p.m. IST on July 10, 2025;
v) The cut-off date for determining the eligibility to vote by remote e-voting or by e-voting system at the AGM shall be **July 04, 2025**; The record date for the purpose of Dividend payment is July 04, 2025.
vi) The Book Closure date starts Saturday, **July 05, 2025, to Friday, July 11, 2025** (both days inclusive)
vii) Any person, who acquires shares of the Company and becomes a member post-dispatch of the Notice of the AGM and holds shares as on the cut-off date i.e. July 04, 2025, may obtain the login ID and password by sending a request to evoting@bigshareonline.com.However, if a member is already registered with RTA for e-voting then the existing user ID and password can be used for casting their vote;
viii) Members may note that: a) once the votes on a resolution is cast by a member, the member shall not be allowed to change it subsequently; b) The facility for e-voting will also be made available during the AGM, and those members present in the AGM through VC facility, who have not cast their vote on the resolutions through remote e-voting and are otherwise not barred from doing so, shall be eligible to vote through the e-voting system at the AGM. c) The members who have cast their votes by remote e-voting prior to the AGM may also attend the AGM but shall not be entitled to cast their votes again; and d) Only persons whose name is recorded in the register of members or in the register of beneficial owners maintained by the depositories as on the cut-off date shall be entitled to avail the facility of remote e-voting or e-voting at the AGM.
ix) The manner of voting remotely for members holding shares in dematerialized mode and for members who have not registered their email addresses is provided in the Notice of the AGM.
x) Shareholders who have not registered their email address and in consequence to which the Notice of e-AGM could not be serviced, may temporarily get their email address and mobile number registered with the Company's RTA, by following the instructions provided at www.bigshareonline.com. In case of any queries, shareholder may write to ivote@bigshareonline.com.
xi) Shareholders may also visit the website of the company www.pelatro.com or the website of Bigshare at www.bigshareonline.com and NSE at www.nseindia.com for downloading the Notice of the AGM.
xii) In case of any queries, shareholder may write to investor@bigshareonline.com.You may also write to the Company at company.secretary@pelatro.com.
xiii) Alternatively, members may send an e-mail request at the email id investor@bigshareonline.com or company.secretary@pelatro.com along with a scanned copy of the signed request letter providing the email address, mobile number, self-attested PAN copy and Client Master copy for sending the Notice of e-AGM and the remote e-voting instructions.

**For Pelatro Limited**
**Sd/-**
**Khushboo Sharma**
**Company Secretary**

**Date:** June 17, 2025
**Place:** Bengaluru